# Akashvani : Bangalore
# Regional Bulletin In Kannada
# 19.05.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**19.05.2025 / 18.40 hrs**

**<><*<><>*><>**

ಮುಖ್ಯಾಂಶಗಳು

- ರಾಜಧಾನಿ ಬೆಂಗಳೂರಿನಲ್ಲಿ ಸುರಿದ ಮಳೆಗೆ ಹಲವು ಪ್ರದೇಶ ಜಲಾವೃತ-ಬಿಬಿಎಂಪಿ ವಾರ್ ರೂಂ ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪರಿಶೀಲನೆ
- ಬೆಂಗಳೂರಿನ ಹೆಸರು ಪ್ರವಾಹದಲ್ಲಿ ಅಳಿಸಿಹೋಗುತ್ತಿದೆ- ಸರ್ಕಾರದ ವಿರುದ್ಧ ಬಿಜೆಪಿ ಅಸಮಧಾನ
- ಬೆಂಗಳೂರು ನಗರದ ಮೇಲಿನ ಒತ್ತಡ ಕಡಿಮೆ ಮಾಡಲು ತುಮಕೂರಿನವರೆಗೆ ಮೆಟ್ರೋ ಯೋಜನೆ ಅಗತ್ಯ - ಸಚಿವ ಡಾ.ಜಿ.ಪರಮೇಶ್ವರ್
- ಹೊಸಪೇಟೆಯಲ್ಲಿ ಸರ್ಕಾರದಿಂದ ನಾಳೆ ಎರಡು ವರ್ಷದ ಸಾಧನಾ ಸಮಾವೇಶ

**<><*<><>*><>**

ಬೆಂಗಳೂರಿನಲ್ಲಿ ರಾತ್ರಿಯಿಡೀ ಸುರಿದ ಮಳೆಗೆ ನಗರದ ಹಲವಾರು ಪ್ರದೇಶಗಳು ಜಲಾವೃತವಾಗಿದ್ದು, ಒಬ್ಬರು ಸಾವನ್ನಪ್ಪಿದ್ದಾರೆ. ಕೆಂಗೇರಿಯಲ್ಲಿ ಸುಮಾರು ೧೦೦ ಮನೆಗಳು ಜಲಾವೃತಗೊಂಡಿದ್ದು, ನೀರನ್ನು ಹೊರಹಾಕಲು ಪಂಪ್ ಸೆಟ್‌ಗಳನ್ನು ಬಳಸಲಾಗಿದೆ. ನಗರದಲ್ಲಿ ನಿನ್ನೆ ರಾತ್ರಿ ೬೬ ಮಿಲಿ ಮೀಟರ್ ಮಳೆಯಾಗಿದೆ. ಕೋರಮಂಗಲ, ಇಂದಿರಾನಗರ, ಸಿಲ್ಕ್ ಬೋರ್ಡ್ ಜಂಕ್ಷನ್, ಶ್ರೀ ಸಾಯಿ ಲೇಔಟ್, ರೇನ್‌ಬೋ ಡ್ರೈವ್ ಲೇಔಟ್ ರಸ್ತೆಗಳ ಮೇಲೆ ಮತ್ತು ಮನೆಗಳಿಗೆ ನೀರು ನುಗ್ಗಿದೆ. ರಸ್ತೆಗಳಲ್ಲಿ ನಿಂತ ನೀರಿನಲ್ಲಿ ಹಲವಾರು ವಾಹನಗಳು ಮುಳುಗಿವೆ. ಬೈರಸಂದ್ರ ಲೇಔಟ್, ಕೆಂಪೇಗೌಡ ರಸ್ತೆ ಮತ್ತು ಕಾಮರಾಜ್ ನಗರದ ವಸತಿ ಪ್ರದೇಶಗಳು ಜಲಾವೃತವಾಗಿದೆ. ಮಳೆ ನೀರಿನಿಂದ ಮುಳುಗಿರುವ ಮಹದೇವಪುರದಲ್ಲಿ ಆಹಾರ ಮತ್ತು ಕುಡಿಯುವ ನೀರನ್ನು ಪೂರೈಸಲು ಎನ್‌ಡಿಆರ್‌ಎಫ್ ತಂಡಗಳೊಂದಿಗೆ ಮಹಾನಗರ ಪಾಲಿಕೆಯು ಟ್ರ್ಯಾಕ್ಟರ್‌ಗಳು, ಜೆಸಿಬಿಗಳು, ಪಂಪ್ ಸೆಟ್‌ಗಳು ಮತ್ತು ಅಗ್ನಿಶಾಮಕ ಸೇವಾ ಸಿಬ್ಬಂದಿಯನ್ನು ರವಾನಿಸಿದೆ. ನಗರದಾದ್ಯಂತ ಬಿದ್ದ ಮರಗಳು ಮತ್ತು ಪ್ರವಾಹವನ್ನು ತೆರವುಗೊಳಿಸಲಾಗುತ್ತಿದೆ. ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಬಿಬಿಎಂಪಿ ವಾರ್ ರೂಂಗೆ ಭೇಟಿ ಪರಿಶೀಲನೆ ನಡೆಸುತ್ತಿದ್ದಾರೆ. ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರವಾಹ ಪೀಡಿತ ಪ್ರದೇಶಗಳ ವೀಕ್ಷಣೆ ನಡೆಸಿ ಅಧಿಕಾರಿಗಳಿಂದ ಮಾಹಿತಿ ಪಡೆಯುತ್ತಿದ್ದಾರೆ.

**<><*<><>*><>**

ಬೆಂಗಳೂರು ನಗರದಲ್ಲಿ ಕಳೆದ ರಾತ್ರಿ ಹಾಗೂ ಇಂದು ವ್ಯಾಪಕವಾಗಿ ಸುರಿದ ಮಳೆಯಿಂದಾಗಿ ಜನ ಜೀವನ ಅಸ್ತವ್ಯಸ್ತವಾಗಿದೆ. ಈ ಹಿನ್ನೆಲೆಯಲ್ಲಿ ಬಿಬಿಎಂಪಿ ಮುಖ್ಯ ಆಡಳಿತಗಾರರಾದ ತುಷಾರ್ ಗಿರಿನಾಥ್ ಹಾಗೂ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಇಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ

ಪರಿಶೀಲನೆ ನಡೆಸಿದರು. ಮಹದೇವಪುರ ವಲಯದ ಸಾಯಿ ಲೇಔಟ್ ಗೆ ಟ್ರ್ಯಾಕ್ಟರ್ ಮೂಲಕ ಭೇಟಿ ನೀಡಿ ಅಹವಾಲು ಆಲಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾಯಿ ಲೇಔಟ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು ಜಲಾವೃತವಾಗಿವೆ. ಗೆದ್ದಲಹಳ್ಳಿ ಬಳಿ ರೈಲ್ವೆ ವೆಂಟ್ ಅಗಲೀಕರಣ ಮಾಡಬೇಕಿದ್ದು, ಈಗಾಗಲೇ ಕಾರ್ಯಾದೇಶ ನೀಡಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಲು ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ. ಜಲಾವೃತವಾಗಿರುವ ಪ್ರದೇಶದಲ್ಲಿ ನಿವಾಸಿಗಳಿಗೆ ಊಟ, ಕುಡಿಯುವ ನೀರು ಹಾಗೂ ವಸತಿ ವ್ಯವಸ್ಥೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಉಭಯ ಅಧಿಕಾರಿಗಳು ಕೇಂದ್ರ ಕಚೇರಿಯಲ್ಲಿನ ಇಂಟಿಗ್ರೇಟೆಡ್ ಕಮಾಂಡ್ ಮತ್ತು ಕಂಟ್ರೋಲ್ ಸೆಂಟರ್ ಹಾಗೂ ನಿಯಂತ್ರಣ ಕೊಠಡಿಗೆ ಭೇಟಿ ನೀಡಿ ಎಲ್ಲಾ ವಲಯ ಅಧಿಕಾರಿಗಳಿಗೆ ಸಮಸ್ಯೆ ಬಗೆಹರಿಸಲು ಸೂಚನೆ ನೀಡಿದ್ದಾರೆ.

**<><*<><>*><>**

ಬ್ರ್ಯಾಂಡ್ ಬೆಂಗಳೂರು, ಗ್ರೇಟರ್ ಬೆಂಗಳೂರು ಮಾಡುವುದಾಗಿ ಹೇಳಿದ ರಾಜ್ಯ ಸರ್ಕಾರ, ರಾಜಧಾನಿಯಲ್ಲಿ ಸುರಿದ ಮಳೆಯಿಂದಾಗಿ ರಸ್ತೆಗಳು, ಕಾಲುವೆಗಳಂತಾಗಿವೆ. ಮಳೆ ನೀರನ್ನು ಸಮರ್ಪಕವಾಗಿ ನಿರ್ವಹಣೆ ಮಾಡದ ಸರ್ಕಾರ ಎರಡು ವರ್ಷದ ಸಾಧನಾ ಸಮಾವೇಶ ಮಾಡುತ್ತಿರುವುದು ನಗೆಪಾಟಲಿನ ಸಂಗತಿ ಎಂದು ರಾಜ್ಯ ಬಿಜೆಪಿ ಹೇಳಿದೆ. ಬೆಂಗಳೂರನ್ನು ನೀರಲ್ಲಿ ಮುಳುಗಿಸಿ ಮೊದಲಿದ್ದ ಬೆಂಗಳೂರಿನ ಹೆಸರನ್ನು ಪ್ರವಾಹದಲ್ಲಿ ಸರ್ಕಾರ ಅಳಿಸಿ ಹಾಕಿದೆ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಬೆಂಗಳೂರಿಂದ ಅತ್ಯಧಿಕ ತೆರಿಗೆ ಪಡೆಯುವ ಸರ್ಕಾರ ಕಳೆದ ಎರಡು ವರ್ಷದಿಂದ ಮಳೆ ಪರಿಹಾರಕ್ಕಾಗಿ ತಮ್ಮ ಸರ್ಕಾರದ ಅವಧಿಯಲ್ಲಿ ನೀಡಿದ್ದ ೨ಸಾವಿರ ಕೋಟಿ ರೂಪಾಯಿ ಬಿಡುಗಡೆ ಮಾಡಿಲ್ಲ ಎಂದು ದೂರಿದ್ದಾರೆ. ‘ಬ್ರ್ಯಾಂಡ್ ಬೆಂಗಳೂರು’ ಮಾಡುತ್ತೇವೆ ಎಂದು ಕನ್ನಡಿಗರಿಗೆ ರಾಜ್ಯ ಸರ್ಕಾರ ‘ಬೀಚ್ ಬೆಂಗಳೂರು’ ತೋರಿಸುತ್ತಿದೆ ಎಂದು ವಿಧಾನ ಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ, ವ್ಯಂಗ್ಯವಾಡಿದ್ದಾರೆ. ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಬ್ರ್ಯಾಂಡ್ ಬೆಂಗಳೂರು ಎನ್ನುವ ಕನಸಿನ ಪದಗಳಿಗಿಂತ ನಮ್ಮ ಬೆಂಗಳೂರಿನಲ್ಲಿ ಜನತೆಗೆ ಬದಕುಲು ಯೋಗ್ಯವಾದ ಮೂಲಸೌಲಭ್ಯಗಳನ್ನು ಕಲ್ಪಿಸುವತ್ತ ರಾಜ್ಯ ಸರ್ಕಾರ ಗಮನ ಹರಿಸಬೇಕು ಎಂದು ಸಲಹೆ ನೀಡಿದ್ದಾರೆ.

**<><*<><>*><>**

ಭಾರತೀಯ ಹವಾಮಾನ ಇಲಾಖೆ ಹಾಗೂ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮುನ್ಸೂಚನೆಯಂತೆ ರಾಜ್ಯದ ಕರಾವಳಿ ಭಾಗದಲ್ಲಿ ಮುಂದಿನ ೨ ದಿನಗಳ ಕಾಲ ರೆಡ್ ಅಲರ್ಟ್ ಘೋಷಿಸಲಾಗಿದೆ. ಸಾರ್ವಜನಿಕರು ಎಚ್ಚರ ವಹಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚನೆ ನೀಡಿದ್ದಾರೆ. ಜಿಲ್ಲೆಯ ಕೆಲವು ಭಾಗಗಳಲ್ಲಿ ಗುಡುಗು ಸಿಡಿಲಿನೊಂದಿಗೆ ಹೆಚ್ಚಿನ ಗಾಳಿಯಿಂದ ಕೂಡಿದ ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದ್ದಾರೆ. ಪ್ರವಾಸಿಗರು, ಸಾರ್ವಜನಿಕರು ಹಾಗೂ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ನಿರ್ದೇಶನ ನೀಡಿದ್ದಾರೆ.

**<><*<><>*><>**

ಬೆಂಗಳೂರು ನಗರದ ಮೇಲಿನ ಒತ್ತಡ ಕಡಿಮೆ ಮಾಡುವುದು ಹಾಗೂ ತುಮಕೂರಿನ ಅಭಿವೃದ್ಧಿಯ ದೃಷ್ಟಿಯಿಂದ ಮೆಟ್ರೋ ಯೋಜನೆಯ ಅಗತ್ಯವಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಹೈದ್ರಾಬಾದ್ ಕಂಪನಿ ಕಾರ್ಯಸಾಧ್ಯತಾ ವರದಿ ಸಿದ್ಧಪಡಿಸಿದ್ದು ಸರ್ಕಾರಕ್ಕೆ ಸಲ್ಲಿಸಿದೆ. ಬಜೆಟ್ ಸೇರಿದಂತೆ ಇನ್ನಿತರ ಸಾಧಕ-ಬಾಧಕ ನೋಡಿ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ. ಈ ಯೋಜನೆಯನ್ನು ವಿರೋಧಿಸಿದ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. "ಬೆಂಗಳೂರಿನ ಇಬ್ಬರು ಸಂಸದರು ಈ ಯೋಜನೆಗೆ ಆಕ್ಷೇಪ ವ್ಯಕ್ತಪಡಿಸಿದ್ದು ಅವರಿಗೆ ಯಾವುದೇ ಕಲ್ಪನೆ ಇಲ್ಲ ಎಂದು ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.

<><*<><>*><>

ನಾಳೆ ರಾಜ್ಯ ಸರ್ಕಾರ ಎರಡು ವರ್ಷ ಪೂರೈಸುತ್ತಿರುವ ಹಿನ್ನೆಲೆಯಲ್ಲಿ ವಿಜಯನಗರದ ಹೊಸಪೇಟೆಯಲ್ಲಿ ಸಮರ್ಪಣೆ ಸಂಕಲ್ಪ ಸಮಾವೇಶ ನಡೆಯಲಿದೆ. ಕೇಂದ್ರದ ಕಾಂಗ್ರೆಸ್ ನಾಯಕರು, ಮುಖ್ಯಮಂತ್ರಿ ಸಿದ್ಧರಾಮಯ್ಯ ಸೇರಿದಂತೆ ಅನೇಕ ಗಣ್ಯರು ಸಮಾರಂಭದಲ್ಲಿ ಪಾಲ್ಗೊಳ್ಳುತ್ತಿರುವುದರಿಂದ ನಗರದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಬಿಗಿಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಬಿಎಲ್ ಶ್ರೀಹರಿ ಬಾಬು ತಿಳಿಸಿದ್ದಾರೆ. ಸಮಾವೇಶದಲ್ಲಿ ಸರ್ಕಾರ ಒಂದು ಲಕ್ಷದ ಹನ್ನೊಂದು ಸಾವಿರದ ನೂರ ಹನ್ನೊಂದು ಕಂದಾಯ ಗ್ರಾಮ ಹಕ್ಕು ಪತ್ರಗಳನ್ನು ವಿತರಿಸಲಿದೆ.

<><*<><>*><>

ಭಾರತೀಯ ಸೇನಾಪಡೆಗಳು ಭಯೋತ್ಪಾದಕರ ವಿರುದ್ದ ನಡೆಸಿದ ಆಪರೇಷನ್ ಸಿಂಧೂರ ಯಶಸ್ವಿಯಾದ ಹಿನ್ನಲೆ, ಹಾಗೂ ಭಯೋತ್ಪಾದನೆಯನ್ನು ಖಂಡಿಸಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ತಿರಂಗಾ ಯಾತ್ರೆ ಹಮ್ಮಿಕೊಳ್ಳಲಾಗಿತ್ತು. ನಾಗರಿಕರು ಹಾಗೂ ವಿದ್ಯಾರ್ಥಿಗಳು ೫೦೦ ಅಡಿ ಉದ್ದದ ತ್ರಿವರ್ಣ ಧ್ವಜದೊಂದಿಗೆ ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿದರು. ಬೆಳಗಾವಿಯಲ್ಲಿ ಡಾ. ಬಿ. ಆರ್. ಅಂಬೇಡ್ಕರ್ ಉದ್ಯಾನವನದಿಂದ ಆರಂಭವಾದ ಯಾತ್ರೆ ಬೆಳಗಾವಿಯ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಶಹಾಪುರದ ಶಿವಾಜಿ ಉದ್ಯಾನವನದಲ್ಲಿ ಕೊನೆಗೊಂಡಿತು. ಯಾತ್ರೆಯಲ್ಲಿ ಪಾಲ್ಗೊಂಡಿದ್ದ ನಿವೃತ್ತ ಸುಭೇದಾರ ಚಂದ್ರಶೇಖರಯ್ಯ ಸವಣಿ ಆಕಾಶವಾಣಿಯೊಂದಿಗೆ ಮಾತನಾಡಿ, ತಿರಂಗಾ ಧ್ವಜಾ ಯಾತ್ರಾ ಸೈನಿಕರಿಗೆ ಸಲ್ಲಿರುವ ಗೌರವ ಎಂದು ತಿಳಿಸಿದ್ದಾರೆ.

ಧ್ವನಿ : ಚಂದ್ರಶೇಖರಯ್ಯ ಸವಣಿ ( ೨೫ ಸೆಕೆಂಡ್ಸ್)

<><*<><>*><>

ಬೆಂಗಳೂರಿನ ರಾಮನ್ ಸಂಶೋಧನಾ ಕೇಂದ್ರದಲ್ಲಿ ಮೇ ೧ ರಿಂದ ೧೫ರವರೆಗೆ ಸ್ವಚ್ಛತಾ ಪಾಕ್ಷಿಕ ನಡೆಯಿತು. ನಾಲ್ಕು ದಿನಗಳ ಕಾಲ ನಡೆದ ಕಾರ್ಯಾಗಾರದಲ್ಲಿ ಸ್ವಚ್ಛತಾ ಪ್ರತಿಜ್ಞೆ, ಸಹಿ ಅಭಿಯಾನ, ಸೆಲ್ಫಿ ಬೂತ್ , ಸ್ವಚ್ಛ ಭಾರತ ಗೀತೆ ಸೇರಿದಂತೆ ಹಲವು ಕಾರ್ಯಕ್ರಮಗಳು ಜರುಗಿತು. ಇದೇ ವೇಳೆ ಈ ತ್ಯಾಜ್ಯ ಸಂಗ್ರಹಣೆ ಸೇರಿದಂತೆ ಸಮುದಾಯ ಜಾಗೃತಿಯನ್ನು ಮೂಡಿಸಲಾಯಿತು.

<><*<><>*><>

ಕೇಂದ್ರ ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ವಿಜಯಪುರ ಜಿಲ್ಲೆಯಲ್ಲಿ ನೊಂದಾಯಿಸಿಕೊಂಡ ೪೫ ಸಾವಿರದ ೮೪೩ ರೈತರ ಪೈಕಿ ೩೯ ಸಾವಿರದ ೫೩೭ ರೈತರಿಂದ ಅತಿ ಹೆಚ್ಚು ಪ್ರಮಾಣದ ೬.೫೬ ಲಕ್ಷ ಕ್ವಿಂಟಾಲ್ ತೊಗರಿಯನ್ನು ಖರೀದಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ತಿಳಿಸಿದ್ದಾರೆ. ರಾಜ್ಯದಲ್ಲಿಯೇ ಅತಿ ಹೆಚ್ಚು ಪ್ರಮಾಣದ ತೊಗರಿಯನ್ನು ವಿಜಯಪುರ ಜಿಲ್ಲೆಯಲ್ಲಿ ಖರೀದಿಸಲಾಗಿದ್ದು, ಕಲಬುರಗಿ ದ್ವಿತಿಯ ಸ್ಥಾನದಲ್ಲಿದೆ. ೧೦ ಕೋಟಿ.೪೪ ಲಕ್ಷ ರೂಪಾಯಿಗಳನ್ನು ೧೪ ಸಾವಿರದ ೬೧೩ ರೈತರಿಗೆ ನೇರನಗದು ವರ್ಗಾವಣೆ ಮೂಲಕ ಜಮೆ ಮಾಡಲಾಗಿದ್ದು, ಬಾಕಿ ಉಳಿದ ರೈತರಿಗೆ ಹಂತ ಹಂತವಾಗಿ ಜಮೆ ಮಾಡಲಾಗುವುದು ಎಂದು ಅವರು ಮಾಹಿತಿ ನೀಡಿದ್ದಾರೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ವಿಜಯಪುರ ನಗರದಲ್ಲಿ ನಡೆಯುತ್ತಿರುವ ಅನಧಿಕೃತ ಗ್ಯಾಸ್ ರಿಫಿಲಿಂಗ್ ಸ್ಥಳಗಳನ್ನು ಗುರುತಿಸಿ, ದಾಳಿ ನಡೆಸುವ ಮೂಲಕ ಪ್ರಕರಣ ದಾಖಲಿಸಿ ಕಠಿಣ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚಿಸಿದ್ದಾರೆ.

೨. ಯಾದಗಿರಿ ನಗರದ ಪತ್ರಿಕಾ ಭವನದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಕಾರ್ಯಕ್ರಮ ನಡೆಯಿತು.

೩. ರಾಮನಗರ ಜಿಲ್ಲಾಡಳಿತದ ವತಿಯಿಂದ ಹಾರೋಹಳ್ಳಿ ಟೌನ್‌ನಲ್ಲಿರುವ ಕೆಪಿಎಸ್ ಮಾದರಿ ಪ್ರಾಥಮಿಕ ಪಾಠಶಾಲೆಯ ಆವರಣದಲ್ಲಿ ಆಯೋಜಿಸಲಾಗಿದ್ದ ಜನತಾ ದರ್ಶನ ಕಾರ್ಯಕ್ರಮವನ್ನು ರಾಮನಗರ ಶಾಸಕ ಎಚ್.ಎ. ಇಕ್ಬಾಲ್ ಹುಸೇನ್ ಉದ್ಘಾಟಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**